# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 2 ಇಎನ್‌ಕ್ಯೂ 09, ದಿನಾಂಕ: 25.04.2009
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. LOK/ARE-4/ENQ-20/2009, ದಿನಾಂಕ: 29.12.2016
3. ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 10.02.2017
4. ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 07.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ)ನಿಯಮಾವಳಿಗಳು 1957 ರ ನಿಯಮ 14(ಎ) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲಾಗಿತ್ತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು-4 ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

> "ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಕಾರ್ಯದರ್ಶಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರು ಮಳಲಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅವಧಿಯಲ್ಲಿ ಮುಧೋಳ ತಾಲ್ಲೂಕಿನ ನಾಗರಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಐಯ್ಯನಬಾವಿ ಹತ್ತಿರ ಸಂಪೂರ್ಣ ಗ್ರಾಮೀಣ ರೋಜಗಾರ್ ಯೋಜನೆಯಡಿ ದೋಬಿ ಘಾಟ್ ಕಟ್ಟಡ ಕಾಮಗಾರಿಯಲ್ಲಿ ನೀರಿನ ತೊಟ್ಟಿಯ ಅಂದಾಜು ವೆಚ್ಚ ಪಟ್ಟಿಯ ತಾಂತ್ರಿಕ ದೋಷದಿಂದ ಕೂಡಿದ್ದರೂ ಸಹ ತಾಂತ್ರಿಕ ಜ್ಞಾನ ಇಲ್ಲದೇ ಇದ್ದಾಗ್ಯೂ ಈ ಕಾಮಗಾರಿಯನ್ನು ಸಂಬಂಧಪಟ್ಟ ಅಭಿಯತರರಿಂದ ತಾಂತ್ರಿಕ ಸಲಹೆ ಮತ್ತು ಸಹಾಯ ಪಡೆಯದೇ ನೀರಿನ ತೊಟ್ಟಿಗೆ ಭೂಮಿ ಮಟ್ಟಕ್ಕಿಂತ ಕೆಳ ಭಾಗದಲ್ಲಿ ತಳಪಾಯ ಹಾಕದೇ ಈ ಕಾಮಗಾರಿಯನ್ನು ಕಾರ್ಯಗತಗೊಳಿಸಿ ಅಳತೆ ಪುಸ್ತಕದಲ್ಲಿ ಅಳತೆಗಳನ್ನು ನಮೂದಿಸಿದ್ದಗ್ಯೂ ಯಾರದೇ ಸಹಿ ಇಲ್ಲದೇ ಇದ್ದಾಗ್ಯೂ ಹಣ ಪಾವತಿ ಮಾಡಿದ್ದು, ಈ ಕಾಮಗಾರಿಯ ಕಳಪೆ ಕಾಮಗಾರಿಯಾಗಿದ್ದ, ನೀರಿನ ತೊಟ್ಟಿ ಬಿದ್ದು, ಇಬ್ಬರ ಮರಣಕ್ಕೆ ಕಾರಣರಾಗಿ ಕರ್ತವ್ಯಲೋಪ ಎಸಗಿದ್ದು, ಈ ಮೂಲಕ ಕರ್ನಾಟಕ ನಾಗರಿಕ ಸೇವಾ (ಸದ್ವರ್ತನೆ) ನಿಯಮಗಳಡಿ ದುರ್ನಡತೆ ಎಸಗಿರುತ್ತೀರಿ."

ವಿಚಾರಣಾಧಿಕಾರಿಯವರು, ಮಾನ್ಯ ಉಪಲೋಕಾಯುಕ್ತರಿಗೆ ವಿಚಾರಣಾ ವರದಿಯನ್ನು ಸಲ್ಲಿಸಿದ್ದು ಸದರಿ ವರದಿಯ ಅನುಸಾರ ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ವಿಚಾರಣಾಧಿಕಾರಿಯವರ ವರದಿಯ ಆಧಾರದ ಮೇಲೆ, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರಿಗೆ "ನೌಕರರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ. 10 ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ" ದಂಡನೆ ವಿಧಿಸಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ಆಪಾದಿತ ನೌಕರರು ನೀಡಿರುವ ಲಿಖಿತ ಹೇಳಿಕೆ, ದಾಖಲೆಗಳನ್ನು ಪರಿಶೀಲಿಸಲಾಗಿ ಸದರಿ ಪ್ರಕರಣದಲ್ಲಿ ಭಾಗಿಯಾದ ಶ್ರೀ ಎಂ.ಎಂ.ಕಲ್ಯಾಣಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) ರನ್ವಯ ದುರ್ನಡತೆ ಎಸಗಿರುವುದು ಸಾಬೀತಾಗಿರುವುದಾಗಿ ತಿಳಿಸಿದ್ದು, ಈ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ. 10 ರಷ್ಟನ್ನು ಶಶ್ವತವಾಗಿ ಕಡಿತಗೊಳಿಸುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.-

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 22.09.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214ಎ ರ ಅನುಸಾರ, ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರಿಗೆ ಪಾವತಿಸಲಾಗುವ ಪಿಂಚಣಿಯಲ್ಲಿ ಶೇ. 10 ರಷ್ಟನ್ನು ಶಾಶ್ವತವಾಗಿ ಕಡಿತಗೊಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬಾಗಲಕೋಟೆ ಜಿಲ್ಲಾ ಪಂಚಾಯತಿ, ಬಾಗಲಕೋಟೆ.
5. ಕಾರ್ಯನಿರ್ವಾಹಕ ಅಧಿಕಾರಿ, ಮುಧೋಳ ತಾಲ್ಲೂಕು ಪಂಚಾಯತಿ, ಮುಧೋಳ, ಬಾಗಲಕೋಟೆ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ಹುನಗುಂದ ತಾಲ್ಲೂಕು ಪಂಚಾಯತಿ, ಹುನಗುಂದ, ಬಾಗಲಕೋಟೆ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7. ಶ್ರೀ ಎಂ.ಎಂ.ಕಲ್ಯಾಣ ಶೆಟ್ಟಿ, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಮಳಲಿ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
8. ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.